**All India Radio: Bangalore**
**Regional Bulletin In Kannada**
**29.08.2025 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**<><><><>**

ಮುಖ್ಯಾಂಶಗಳು

1. ಮಿಶ್ರ ಬೆಳೆ ಬೆಳೆಯುವ ರೈತರಿಗೆ ಹೆಚ್ಚಿನ ಪ್ರೋತ್ಸಾಹ- ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಭರವಸೆ
2. ದೇವನಹಳ್ಳಿ ಬಳಿ ೫೦೦ ಕೋಟಿ ರೂಪಾಯಿ ವೆಚ್ಚದಲ್ಲಿ ಮೆಗಾ ರೈಲ್ವೆ ಕೋಚಿಂಗ್ ಟರ್ಮಿನಲ್ ನಿರ್ಮಾಣ ಗುರಿ - ಕೇಂದ್ರ ಸಚಿವ ವಿ.ಸೋಮಣ್ಣ
3. ಮಾಗಡಿ ತಾಲೂಕಿನಲ್ಲಿ ವಿವಿಧ ಇಲಾಖೆಗಳ ಅಭಿವೃದ್ಧಿ ಯೋಜನೆಗಳಿಗೆ ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಚಾಲನೆ
4. ಬೆಂಗಳೂರಿನಿಂದ ಜಪಾನಿನ ಒಸಾಕಾ, ನಗೋಯಾಗೆ ನೇರ ವಿಮಾನ ಸೇವೆ ಕುರಿತಂತೆ ಸಚಿವ ಎಂ.ಬಿ.ಪಾಟೀಲ್ ಚರ್ಚೆ
5. ಯಾದಗಿರಿಯಲ್ಲಿ ವಾರ್ತಾಶಾಖೆಯಿಂದ ವಾರ್ತಾಲಾಪ ಕಾರ್ಯಾಗಾರ; ಕೇಂದ್ರ ಸರ್ಕಾರದ ಯೋಜನೆಗಳ ಬಗ್ಗೆ ಮಾಹಿತಿ

<><><><>

ಮಿಶ್ರ ಬೆಳೆ ಬೆಳೆಯುವ ರೈತರಿಗೆ ಹೆಚ್ಚಿನ ಪ್ರೋತ್ಸಾಹ ನೀಡಲಾಗುವುದು ಎಂದು ಕೇಂದ್ರ ಕೃಷಿ ರೈತ ಕಲ್ಯಾಣ ಮತ್ತು ಗ್ರಾಮೀಣಭಿವೃದ್ಧಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ತಿಳಿಸಿದ್ದಾರೆ. ಮೈಸೂರು ಜಿಲ್ಲೆಯ ಟಿ ನರಸೀಪುರ ತಾಲೂಕಿನ ವರಕೂಡು ಗ್ರಾಮದ ರೈತರ ಜಮೀನಿಗೆ ಭೇಟಿ ನೀಡಿ ರೈತರೊಂದಿಗೆ ಸಂವಾದ ನಡೆಸಿ ಮಾತನಾಡಿದ ಅವರು, ಕೇವಲ ಒಂದು ಎಕರೆ ಪ್ರದೇಶದಲ್ಲಿ ಸಮಗ್ರ ಕೃಷಿ ಮಾಡಿ ಹೆಚ್ಚು ಲಾಭ ಬೆಳೆಯಬಹುದು. ಬೆಳೆ ಬೆಳೆಯುವ ಜೊತೆಗೆ ಪಶು ಪಾಲನೆ, ಕುರಿ ಸಾಗಾಣಿಕೆ, ಕೋಳಿ ಸಾಗಾಣಿಕೆ ಸೇರಿದಂತೆ ವಿವಿಧ ಉಪಕಸುಬು ಮಾಡಬಹುದು ಎಂದು ಹೇಳಿದ್ದಾರೆ. ರೈತರ ಹಿತ ಕಡೆಗಣಿಸಿ ಯಾವುದೇ ದೇಶದೊಂದಿಗೆ ಒಡಂಬಡಿಕೆ ಮಾಡಿಕೊಳ್ಳುವುದಿಲ್ಲ ಎಂದು ಭರವಸೆ ನೀಡಿದ್ದಾರೆ. ಮುಂಬರುವ ದಿನಗಳಲ್ಲಿ ಪ್ರಾಯೋಗಿಕವಾಗಿ ಮಿಶ್ರ ಬೆಳೆ ಬೆಳೆಯಲು ಹೆಚ್ಚಿನ ಉತ್ತೇಜನ ನೀಡುವುದರ ಜೊತೆಗೆ ರೈತರನ್ನು ಲಾಭದಾಯಕ ದತ್ತ ಕೊಂಡೊಯ್ಯಲು ಪ್ರಯತ್ನಿಸಲಾಗುವುದು ಎಂದು ತಿಳಿಸಿದ್ದಾರೆ.

<><><><>

ರಾಜ್ಯದಲ್ಲಿ ಹೆಚ್ಚುವರಿಯಾಗಿ ದೇವನಹಳ್ಳಿ ಬಳಿ ಸುಮಾರು ೫೦೦ ಕೋಟಿ ರೂಪಾಯಿ ವೆಚ್ಚದಲ್ಲಿ ಮೆಗಾ ಕೋಚಿಂಗ್ ಟರ್ಮಿನಲ್ ನಿರ್ಮಾಣ ಮಾಡುವ ಗುರಿ ಹೊಂದಲಾಗಿದೆ ಎಂದು ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವ ವಿ. ಸೋಮಣ್ಣ ತಿಳಿಸಿದ್ದಾರೆ. ಬೆಂಗಳೂರು ನಗರ ಹಾಗೂ ಸುತ್ತಮುತ್ತಲಿನ ರಸ್ತೆ ಮೇಲ್ಸೇತುವೆ, ಕೆಳ ಸೇತುವೆ ನಿರ್ಮಾಣ ಹಾಗೂ ಇತರೆ ರೈಲ್ವೆ ಪ್ರಸ್ತಾವನೆಗಳ ಕುರಿತು ರೈಲ್ವೆ ಅಧಿಕಾರಿಗಳೊಂದಿಗೆ ಹಾಗೂ ತೆಂಗು ಬೆಳೆ ರೋಗ ಹಾಗೂ ಇತ್ಯಾದಿ ಸಮಸ್ಯೆಗಳ ಬಗ್ಗೆ ಕೃಷಿ ಇಲಾಖೆ ಐ. ಸಿ. ಎ. ಆರ್. ಸಂಸ್ಥೆ ಸದಸ್ಯರು, ಕೃಷಿ ವಿಜ್ಞಾನಿಗಳು ಮತ್ತು ಅಧಿಕಾರಿಗಳೊಂದಿಗೆ ಇಂದು ಅವರು, ಸಭೆ ನಡೆಸಿದರು. ಬಳಿಕ ಮಾತನಾಡಿದ ಅವರು ರಾಜ್ಯದಲ್ಲಿ ತುಮಕೂರು, ಮಂಡ್ಯ, ಬೆಂಗಳೂರು ಗ್ರಾಮಾಂತರದಲ್ಲಿ ತೆಂಗು ಬೆಳೆ ರೋಗ ಹೆಚ್ಚಾಗಿರುವ ಬಗ್ಗೆ ಚರ್ಚೆಯಾಗಿದೆ. ರಾಜ್ಯಕ್ಕೆ ಆಗಮಿಸಿರುವ ಕೇಂದ್ರ ಕೃಷಿ ಸಚಿವರ ಬಳಿ ಈ ಕುರಿತು ಚರ್ಚಿಸಲಾಗುವುದು ಎಂದು ಹೇಳಿದ್ದಾರೆ. ಬೆಂಗಳೂರು ನಗರ ಹಾಗೂ ಸುತ್ತಮುತ್ತಲಿನ ರಸ್ತೆ ಮೇಲ್ಸೇತುವೆ, ಕೆಳ ಸೇತುವೆಗಳನ್ನು ಹಾಗೂ ಎಲ್ಲಾ ಅಂಡರ್ ಪಾಸ್‌ಗಳನ್ನು ೨೦೨೬ರ ಮಾರ್ಚ್ ಒಳಗೆ ಪೂರ್ಣಗೊಳಿಸುವ ಗುರಿ ಹೊಂದಲಾಗಿದೆ ಎಂದು ತಿಳಿಸಿದ್ದಾರೆ.

**ಧ್ವನಿ : ವಿ.ಸೋಮಣ್ಣ, ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವ**

<><><>

ಮಾಗಡಿ ತಾಲ್ಲೂಕಿನಲ್ಲಿ ವಿವಿಧ ಇಲಾಖೆಗಳ ಅಭಿವೃದ್ಧಿ ಯೋಜನೆಗಳಿಗೆ ಉಪಮುಖ್ಯಂತ್ರಿ ಡಿ.ಕೆ.ಶಿವಕುಮಾರ್, ಜಿಲ್ಲಾ ಉಸ್ತುವಾರಿ ಸಚಿವ ರಾಮಲಿಂಗಾರೆಡ್ಡಿ, ಸಚಿವ ದಿನೇಶ್ ಗುಂಡೂರಾವ್ ಇಂದು ಚಾಲನೆ ನೀಡಿದರು. ಮಾಗಡಿ ಪಟ್ಟಣದ ಐತಿಹಾಸಿಕ ಕೆಂಪೇಗೌಡರ ಕೋಟೆಯ ಜೀರ್ಣೋದ್ಧಾರ ಕಾಮಗಾರಿ, ಮಾಗಡಿ ತಾಲ್ಲೂಕು ಸಾರ್ವಜನಿಕ ಆಸ್ಪತ್ರೆಯ ನೂತನ ಕಟ್ಟಡ ನಿರ್ಮಾಣ ಕಾಮಗಾರಿ, ಮಾಗಡಿ ಪಟ್ಟಣದ ಗೌರಮ್ಮನ ಕೆರೆಯ ಸೌಂದರೀಕರಣ ಸೇರಿದಂತೆ ಹಲವು ಕಾರ್ಯಕ್ರಮಗಳಿಗೆ ಶಂಕು ಸ್ಥಾಪನೆ ನೆರವೇರಿಸಿದರು. ಬಳಿಕ ಮಾತನಾಡಿದ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಈ ಭಾಗದ ಜನರ ಅಭಿವೃದ್ಧಿಯ ದೃಷ್ಟಿಯಿಂದ ಜಿಲ್ಲೆಯ ಹೆಸರು ಬದಲಾವಣೆಗೆ ನಿರ್ಧರಿಸಲಾಗಿದೆ ಎಂದು ತಿಳಿಸಿದರು. ಸತ್ತೆಗಾಲದಿಂದ ಮಾಗಡಿಯ ೪೪ ಕೆರೆಗಳಿಗೆ ಕಾವೇರಿ ನೀರು ತುಂಬಿಸುವ ಯೋಜನೆ ಸೇರಿದಂತೆ ನೀರಾವರಿ ಇಲಾಖೆಯಿಂದ ಕ್ಷೇತ್ರದ ಅಭಿವೃದ್ಧಿಗೆ ೧೦೦ಕೋಟಿಗೂ ಅನುದಾನ ನೀಡಲಾಗಿದೆ ಎಂದು ಹೇಳಿದರು.

<><><>

ಬೆಂಗಳೂರಿನಿಂದ ಜಪಾನಿನ ಪ್ರಮುಖ ಕೈಗಾರಿಕ ನಗರಗಳಾದ ಒಸಾಕ ಮತ್ತು ನಗಯೋಗೆ ನೇರ ವಿಮಾನ ಸೇವೆ ಪ್ರಾರಂಭಿಸುವ ಕುರಿತಂತೆ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ಜಪಾನ್ ಕಾನ್ಸೂಲ್ ಜನರಲ್ ನಕಾನೆ ಟ್ಸುಟೋಮು ಅವರೊಂದಿಗೆ ಚರ್ಚೆ ನಡೆಸಿದರು. ಬಳಿಕ

ಮಾತನಾಡಿದ ಅವರು, ಬೆಂಗಳೂರಿನಿಂದ ಒಸಾಕ ಮತ್ತು ನಗಯೋಗೆ ವಿಮಾನ ಸೇವೆ ಪ್ರಾರಂಭಿಸುವುದು ಅತ್ಯಗತ್ಯವಾಗಿದೆ ಎಂದು ಹೇಳಿದರು. ಜಪಾನೀಸ್ ಭಾಷಾ ಕೋರ್ಸ್‌ಗಳನ್ನು ಪರಿಚಯಿಸಲು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಸೇರಿದಂತೆ ಸ್ಥಳೀಯ ವಿಶ್ವವಿದ್ಯಾನಿಲಯಗಳ ಸಹಯೋಗದೊಂದಿಗೆ ಕೋರ್ಸ್‌ಗಳನ್ನು ಆರಂಭಿಸಲಾಗುವುದು ಎಂದು ಹೇಳಿದ್ದಾರೆ.

<><><><>

ಸೆಪ್ಟೆಂಬರ್ ೩ ಮತ್ತು ೪ ರಂದು ನವದೆಹಲಿಯಲ್ಲಿ ಜಿಎಸ್‌ಟಿ ಕೌನ್ಸಿಲ್ ಸಭೆ ನಡೆಯಲಿದೆ. ಈ ಹಿನ್ನೆಲೆಯಲ್ಲಿ  ನವದೆಹಲಿಯಲ್ಲಿಂದು ನಡೆದ ೮ ರಾಜ್ಯಗಳ ಸಮಾಲೋಚನಾ ಸಭೆಯಲ್ಲಿ ರಾಜ್ಯದ ಪರವಾಗಿ ಕೃಷಿ ಸಚಿವ ಕೃಷ್ಣ ಭೈರೇಗೌಡ ಪಾಲ್ಗೊಂಡಿದ್ದರು. ಸಭೆಯಲ್ಲಿ ಕೇಂದ್ರ ಸರ್ಕಾರದ ಪ್ರಸ್ತಾವನೆಗಳಿಂದ ಉಂಟಾಗಬಹುದಾದ ಗಣನೀಯ ಪ್ರಮಾಣದ ರಾಜಸ್ವ ನಷ್ಟದ ಬಗ್ಗೆ  ಕಳಕಳಿ ವ್ಯಕ್ತವಾಗಿದೆ. ಜಿಎಸ್‌ಟಿ ಪುನರ್ ಪ್ರಸ್ತಾವನೆಯಿಂದ ಸುಮಾರು ೧.೫ ಕೋಟಿಯಿಂದ ಎರಡು ಟ್ರಿಲಿಯನ್ ರೂಪಾಯಿಗಳಷ್ಟು ಆದಾಯ ನಷ್ಟವಾಗುವ ಹಿನ್ನೆಲೆಯಲ್ಲಿ ನಷ್ಟಕ್ಕೆ ಪರಿಹಾರ ಕೋರಲು ನಿರ್ಧರಿಸಿವೆ. ಆದಾಯವನ್ನು ರಾಜ್ಯಗಳ ನಡುವೆ ವಿತರಿಸಬೇಕು ಎಂದು ಒತ್ತಾಯಿಸಲು ನಿರ್ಧರಿಸಲಾಗಿದೆ.

<><><><>

ಭಾರತ ಸರ್ಕಾರದ ವಾರ್ತಾ ಶಾಖೆ ಬೆಂಗಳೂರು ಹಾಗೂ ಯಾದಗಿರಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಸಂಯುಕ್ತಾಶ್ರಯದಲ್ಲಿ ಯಾದಗಿರಿಯಲ್ಲಿ ಇಂದು ಕೇಂದ್ರ ಪುರಸ್ಕೃತ ಯೋಜನೆಗಳ ಕುರಿತು "ವಾರ್ತಾಲಾಪ" ಕಾರ್ಯಾಗಾರ ನಡೆಯಿತು. ಯಾದಗಿರಿ ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರು ಕಾರ್ಯಕ್ರಮ ಉದ್ಘಾಟಿಸಿದರು.

ಶಾಸಕ ಚನ್ನಾರೆಡ್ಡಿ ಮಾತನಾಡಿ, ಸರ್ಕಾರದ ಅಭಿವೃದ್ಧಿ ಯೋಜನೆಗಳನ್ನು ಹಳ್ಳಿ ಹಳ್ಳಿಗೆ ಮುಟ್ಟಿಸುವಲ್ಲಿ ಮಾಧ್ಯಮಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ತಿಳಿಸಿದರು. ವಾರ್ತಾ ಶಾಖೆಯ, ಬೆಂಗಳೂರಿನ ಹೆಚ್ಚುವರಿ ಮಹಾನಿರ್ದೇಶಕ  ಎಸ್.ಜಿ. ರವೀಂದ್ರ  ಮಾತನಾಡಿ, ಕೇಂದ್ರ ಸರ್ಕಾರದ ಯೋಜನೆಗಳು ರಾಜ್ಯ ಸರ್ಕಾರದ ಮೂಲಕವೇ ಅನುಷ್ಠಾನವಾಗುತ್ತಿದ್ದು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಒಂದಾಗಿ ಕೆಲಸ ಮಾಡಿದಾಗ ಮಾತ್ರ ಯೋಜನೆಗಳ ಸಮರ್ಪಕ ಅನುಷ್ಠಾನ ಸಾಧ್ಯ ಎಂದು ಅಭಿಪ್ರಾಯ ಪಟ್ಟಿದ್ದಾರೆ.

**ಧ್ವನಿ : ಎಸ್.ಜಿ. ರವೀಂದ್ರ  ಹೆಚ್ಚುವರಿ ಮಹಾನಿರ್ದೇಶಕ**

ಗ್ರಾಮೀಣ ಪ್ರದೇಶಗಳಲ್ಲಿ ೧೦೪ರಿಂದ ೫೧೦ ಸಮುದಾಯ ವಾಹಿನಿಗಳನ್ನು ಹೆಚ್ಚಿಸಲಾಗಿದೆ. ಹೊಸದಾಗಿ ೨೭೪ ಸಮುದಾಯ ಬಾನುಲಿ ಕೇಂದ್ರಗಳು, ೭ ದೂರದರ್ಶನ ವಾಹಿನಿಗಳಿಗೆ

ಅನುಮೋದನೆ ನೀಡಲಾಗಿದೆ. ಪ್ರಧಾನಮಂತ್ರಿ ಆವಾಸ್ ಯೋಜನೆ, ಆಯುಷ್ಮಾನ್ ಭಾರತ, ಜನೌಷಧಿ ಕೇಂದ್ರಗಳು, ಸರ್ಕಾರದ ಎಲ್ಲ ಯೋಜನೆಗಳ ಬಗ್ಗೆ ಸಮಗ್ರ ಮಾಹಿತಿ ಒದಗಿಸುವ ಉಮಂಗ್ ಅಪ್ಲಿಕೇಷನ್ ಸೇರಿದಂತೆ ವಿಶೇಷವಾಗಿ ರೈತರಿಗೆ, ಯುವಕರಿಗೆ, ಮಕ್ಕಳಿಗೆ, ಮಹಿಳೆಯರಿಗೆ, ಆರೋಗ್ಯ, ವಸತಿ ಕ್ಷೇತ್ರಗಳಲ್ಲಿ ಜನಪ್ರಿಯ ಯೋಜನೆ ಹಾಗೂ ಉಪಕ್ರಮಗಳು ಅನುಷ್ಠಾನಗೊಂಡಿವೆ. ಯಾದಗಿರಿ ಜಿಲ್ಲಾಧಿಕಾರಿ ಹರ್ಷಲ್ ಭೋಯರ್ ಮಾತನಾಡಿ, ಯಾದಗಿರಿ ಕೃಷಿಯಾಧಾರಿತ ಜಿಲ್ಲೆಯಾಗಿದ್ದು, ಸುಸ್ಥಿರ ಕೃಷಿ, ತೋಟಗಾರಿಕೆ, ನೀರಾವರಿ ಯೋಜನೆಗಳ ಅನುಷ್ಠಾನ ಕುರಿತು ಈ ಕಾರ್ಯಾಗಾರದಲ್ಲಿ ಸಮಗ್ರ ಮಾಹಿತಿ ದೊರಕಲಿದೆ ಎಂದರು.

<><><><>

ವಿಶ್ವವಿಖ್ಯಾತ ನಾಡಹಬ್ಬ ದಸರಾ ಮಹೋತ್ಸವದ ಪ್ರಮುಖ ಆಕರ್ಷಣೆಯಾದ ಡ್ರೋನ್ ಶೋ ಪ್ರಾಯೋಗಿಕ ಪ್ರದರ್ಶನ ಸೆಪ್ಟೆಂಬರ್ ೨೮ ಮತ್ತು ೨೯ರಂದು ನಡೆಯಲಿದೆ. ಈ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಲಕ್ಷ್ಮೀಕಾಂತ ರೆಡ್ಡಿ, ದಸರಾ ವಿದ್ಯುತ್ ದೀಪಾಲಂಕಾರ ಹಾಗೂ ಡ್ರೋನ್ ಶೋ ಕಾರ್ಯಕ್ರಮ ಯಶಸ್ವಿಯಾಗಿ ನಡೆಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಗಮದ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಬನ್ನಿಮಂಟಪದ ಪಂಜಿನ ಕವಾಯತು ಮೈದಾನದಲ್ಲಿ ಈ ಬಾರಿ ಏರ್ ಶೋ ನಡೆಯಲಿದೆ. ಇದರ ನಡುವೆ ಡ್ರೋನ್ ಶೋ ನಡೆಸಬೇಕಿದೆ. ಪಂಜಿನ ಕವಾಯತು ಕಾರ್ಯಕ್ರಮದ ತಾಲೀಮು ನಡೆಯುವ ಹಿನ್ನೆಲೆಯಲ್ಲಿ ಯಾವುದೇ ಅಡಚಣೆ ಆಗದಂತೆ ಮೂರು ಕಾರ್ಯಕ್ರಮಗಳನ್ನು ನಡೆಸಬೇಕಾಗಿದೆ ಎಂದು ಹೇಳಿದರು.

<><><><>

ಚಿಕ್ಕಮಗಳೂರು ಜಿಲ್ಲೆಯ ಮುಳ್ಳಯ್ಯನಗಿರಿ ಪ್ರವಾಸಿ ತಾಣಗಳಿಗೆ ತೆರಳುವ ಪ್ರವಾಸಿಗರಿಗೆ ಸೆಪ್ಟಂಬರ್ ೧ ರಿಂದು ನೂತನ ನಿಯಮಗಳನ್ನು ಜಾರಿಗೊಳಿಸಲಾಗಿದೆ ಎಂದು ಜಿಲ್ಲಾ ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಈ ಭಾಗದಲ್ಲಿ ಉಂಟಾಗುತ್ತಿರುವ ಅಪಘಾತಗಳು, ಟ್ರಾಫಿಕ್ ಸಮಸ್ಯೆ, ಜನ ಸಂದಣಿ ಇವುಗಳನ್ನು ನಿಯಂತ್ರಿಸಲು ನಿಯಮ ಜಾರಿಗೊಳಿಸಲಾಗಿದೆ. ಮುಳ್ಳಯನಗಿರಿ, ಸೀತಾಳಯ್ಯನಗಿರಿ, ಶ್ರೀ ಗುರು ದತ್ತಾತ್ರೇಯ ಬಾಬಾಬುಡನ್ ಸ್ವಾಮಿ ದರ್ಗಾ, ಮಾಣಿಕ್ಯಧಾರ ಪ್ರವಾಸಿ ತಾಣಗಳಿಗೆ ಬೆಳಗ್ಗೆ ೬ ರಿಂದ ಮಧ್ಯಾಹ್ನ ೧೨ ಹಾಗು ಮಧ್ಯಾಹ್ನ ೧ ರಿಂದ ಸಂಜೆ ೬ ಗಂಟೆವರೆಗೆ ಎರಡು ಹಂತದಲ್ಲಿ ಪ್ರವಾಸಿಗರ ವಾಹನಗಳು ತೆರಳಲು ಅನುಮತಿ ನೀಡಲಾಗಿದೆ. ಒಂದು ದಿನಕ್ಕೆ ೬೦೦ ವಾಹನಗಳಿಗೆ ಮಾತ್ರ ಅವಕಾಶ ನೀಡಲಾಗಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>